ಕರ್ನಾಟಕ ಸರ್ಕಾರ

ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು.

ಸಂಖ್ಯೆ: ಇ-ಆಡಳಿತ ವೆಬ್ ಸೈಟ್ 1/2016-17 ದಿನಾಂಕ: 22-06-2016.

**ಸುತ್ತೋಲೆ**

ವಿಷಯ: ಇಲಾಖಾ ವೆಬ್‌ಸೈಟ್ ಹಾಗೂ ತ್ರಂತ್ರಾಂಶಗಳ ತಾಂತ್ರಿಕ ಆಡಿಟ್ ಮಾಡಿಸುವ ವಿಚಾರವಾಗಿ.

ಉಲ್ಲೇಖ: ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಡಿಪಿಎಆರ್ (ಇ-ಆಡಳಿತ) ಇವರ ಪತ್ರ ಸಂಖ್ಯೆ: ಡಿಪಿಎಆರ್ 95 ಇಜಿಒವಿ2016 ದಿನಾಂಕ:09.06.2016.(ಪ್ರತಿ ಲಗತ್ತಿಸಿದೆ)

ಉಲ್ಲೇಖಿತ ಸರ್ಕಾರದ ಪತ್ರದಲ್ಲಿ ಪ್ರಸ್ತಾಪಿಸಿದಂತೆ, ಸರ್ಕಾರದ ಪ್ರತಿ ಇಲಾಖೆಯ ವೆಬ್‌ಸೈಟ್ ಹಾಗೂ ಇಲಾಖೆಗಳ ಅವಶ್ಯಕತೆಗನುಗುಣವಾಗಿ ಅಭಿವೃದ್ಧಿಗೊಳಿಸಿರುವ ಹಾಗೂ ಅಭಿವೃದ್ಧಿಗೊಳಿಸುವ ಎಲ್ಲಾ ತಂತ್ರಾಂಶಗಳನ್ನು ಕಡ್ಡಾಯವಾಗಿ ತಾಂತ್ರಿಕ ಆಡಿಟ್ ಮಾಡಿಸತಕ್ಕದ್ದು. ಇಲಾಖಾ ವೆಬ್‌ಸೈಟ್ ಹಾಗೂ ಇಲಾಖೆಯ ವತಿಯಿಂದ ಉಪಯೋಗಿಸುವ ತಂತ್ರಾಂಶದಲ್ಲಿರುವ ಮಾಹಿತಿಗಳನ್ನು Hacking ಮಾಡುವ ಸಂದರ್ಭಗಳು ಇತ್ತೀಚಿನ ದಿನಗಳಲ್ಲಿ ಹೆಚ್ಚಾಗಿರುತ್ತದೆ.

ಆದ್ದರಿಂದ ಇಲಾಖಾ ವೆಬ್‌ಸೈಟ್‌ನ್ನು ನಿಯತಕಾಲಿಕವಾಗಿ ಹಾಗೂ ತಂತ್ರಾಂಶಗಳಲ್ಲಿ ಮಾರ್ಪಾಡು ಮಾಡಿದ ಸಂದರ್ಭಗಳಲ್ಲಿ ತಾಂತ್ರಿಕ ಆಡಿಟ್ ಮಾಡಿಸುವುದು ಕಡ್ಡಾಯವಾಗಿದೆ. ರಾಜ್ಯ ದತ್ತಾಂಶ ಕೇಂದ್ರದಲ್ಲಿ ಇಲಾಖೆಯ ತಂತ್ರಾಂಶಗಳನ್ನು ಅಳವಡಿಸುವ ಮೊದಲು ತಾಂತ್ರಿಕ ಆಡಿಟ್ ಮಾಡಿಸಿದ ನಂತರವೇ ತಾಂತ್ರಿಕ ಆಡಿಟ್ ಪ್ರಮಾಣ ಪತ್ರ ಪಡೆದು ಅಳವಡಿಸಲು ಕ್ರಮವಹಿಸುವುದು ಆಧ್ಯ ಕರ್ತವ್ಯವಾಗಿದೆ.

ಈ ನಿಟ್ಟಿನಲ್ಲಿ ಇಲಾಖೆಯ ವತಿಯಿಂದ ಹೊಸದಾಗಿ ತಂತ್ರಾಂಶಗಳನ್ನು ಅಭಿವೃದ್ಧಿಗೊಳಿಸಿದ್ದು, ತಂತ್ರಾಂಶದಲ್ಲಿ ಮಾರ್ಪಾಡು ಮಾಡಿದ ಸಂದರ್ಭಗಳಲ್ಲಿ ತಾಂತ್ರಿಕ ಆಡಿಟ್ ಮಾಡಿಸಿ ರಾಜ್ಯ ದತ್ತಾಂಶ ಕೇಂದ್ರದಲ್ಲಿ ಅಳವಡಿಸಲು ಕ್ರಮಹಿಸುವುದು. ನಿಮ್ಮ ಕಛೇರಿಯಿಂದ ಪ್ರತ್ಯೇಕವಾಗಿ ವೆಬ್‌ಸೈಟ್‌ನ್ನು ನಿರ್ವಹಣೆ ಮಾಡುತ್ತಿದ್ದ ಸಂದರ್ಭಗಳಲ್ಲಿ ನಿಯತಕಾಲಿಕವಾಗಿ ತಾಂತ್ರಿಕ ಆಡಿಟ್ ಮಾಡಿಸಿ, ಸೂಕ್ತ ರೀತಿಯಲ್ಲಿ ನಿರ್ವಹಣೆಯನ್ನು ಮಾಡಲು ಈ ಮೂಲಕ ಸೂಚಿಸಿದೆ.

ಆಯುಕ್ತರು

ಸಾರ್ವಜನಿಕ ಶಿಕ್ಷಣ ಇಲಾಖೆ

ಪ್ರತಿಯನ್ನು

1. ರಾಜ್ಯ ಯೋಜನಾ ನಿರ್ದೇಶಕರು, ಸರ್ವ ಶಿಕ್ಷಣ ಅಭಿಯಾನ / ಆರ್.ಎಂ.ಎಸ್.ಎ ಇವರಿಗೆ ಮಾಹಿತಿಗಾಗಿ
2. ಅಪರ ಆಯುಕ್ತರು, ಧಾರವಾಡ ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತಕ್ರಮಕ್ಕಾಗಿ
3. ಅಪರ ಆಯುಕ್ತರು, ಗುಲ್ಬರ್ಗಾ ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತಕ್ರಮಕ್ಕಾಗಿ
4. ನಿರ್ದೇಶಕರು, ಸರ್ವ ಶಿಕ್ಷಣ ಅಭಿಯಾನ ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತಕ್ರಮಕ್ಕಾಗಿ
5. ನಿರ್ದೇಶಕರು, ಆರ್.ಎಂ.ಎಸ್ ಎ ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತಕ್ರಮಕ್ಕಾಗಿ
6. ನಿರ್ದೇಶಕರು, ಡಿ.ಎಸ್.ಇ.ಆರ್.ಟಿ, ಬೆಂಗಳೂರು ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತಕ್ರಮಕ್ಕಾಗಿ
7. ನಿರ್ದೇಶಕರು, ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಮಲ್ಲೇಶ್ವರಂ ಬೆಂಗಳೂರು ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತಕ್ರಮಕ್ಕಾಗಿ
8. ವಿಶೇಷಾಧಿಕಾರಿಗಳು, ಕೇಂದ್ರೀಕೃತ ದಾಖಲಾತಿ ಘಟಕ, ಬೆಂಗಳೂರು ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತಕ್ರಮಕ್ಕಾಗಿ
9. ಸಹ ನಿರ್ದೇಶಕರು, ಮಧ್ಯಾಹ್ನ ಉಪಹಾರ ಯೋಜನೆ, ಬೆಂಗಳೂರು ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತಕ್ರಮಕ್ಕಾಗಿ
10. ವ್ಯವಸ್ಥಾಪಕ ನಿರ್ದೇಶಕರು, ಪಠ್ಯ ಪುಸ್ತಕ ಮುದ್ರಣಾಲಯ ಬೆಂಗಳೂರು ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತಕ್ರಮಕ್ಕಾಗಿ
11. ಕಛೇರಿ ಪ್ರತಿ.